ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರಾಜಕೀಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 1/2/2020

## ಬಿಜೆಪಿಯವರು ಈ ಹಿಂದೆ ಏನು ಮಾಡಿದ್ದರು ಎನ್ನುವುದು ನೋಡಲಿ | ಬಿಜೆಪಿ ದ್ವೇಷದ ರಾಜಕಾರಣ ಮಾಡುತ್ತಿದೆ

# ಸ್ಪೀಕರ್ ಸರ್ವಾಧಿಕಾರಿ ಧೋರಣೆ

1/2/20

**ವಿಶ್ವವಾಣಿ ಸುದ್ದಿಮನೆ** ಬೆಂಗಳೂರು

ಜಂಟಿ ಅಧಿವೇಶನದ ವೇಳೆ ರಾಜ್ಯಪಾಲರ ಭಾಷಣಕ್ಕೆ ಯಾವುದೇ ಸದಸ್ಯರು ಅಡ್ಡಿಪಡಿಸುವುದು ಅಥವಾ ಕ್ರಿಯಾಲೋಪ ಎತ್ತಿದರೆ ಅಂತಹ ಸದಸ್ಯರನ್ನು ಅಮಾನತು ಪಡಿಸುವುದಾಗಿ ವಿಧಾನಸಭೆಯ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಅವರು ಹೊರಡಿಸಿರುವ ಅಧಿಸೂಚನೆಗೆ ಮಾಜಿ ಸಚಿವ ಡಿ.ಕೆ.ಶಿವಕುಮಾರ್ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಜಾಪ್ರಭುತ್ವದಲ್ಲಿ ಎಲ್ಲರಿಗೂ ಮಾತನಾಡುವ ಹಕ್ಕಿದೆ. ಆದರೆ ವಾಕ್ ಸ್ವಾತಂತ್ರ್ಯವನ್ನು ಕಿತ್ತುಕೊಳ್ಳುವ ಬಿಜೆಪಿಯವರದ್ದು ಸರ್ವಾಧಿಕಾರಿ ಧೋರಣೆಯಾಗಿದೆ. ಈ ಬಗ್ಗೆ ಮೊದಲು ಬಿಎಸ್‌ಸಿ ಸಭೆಯಲ್ಲಿ ಚರ್ಚೆ ಮಾಡಲಿ. ಆ ನಂತರ ಯಾವ ನಿರ್ಧಾರ ಬೇಕಾದರೂ ತೆಗೆದುಕೊಳ್ಳಲಿ ಎಂದರು.



ಸ್ಪೀಕರ್ ಅಧಿವೇಶನದ ಕಲಾಪದಿಂದ ಮಾಧ್ಯಮಗಳನ್ನೇ ಹೊರಗಿಡುವ ಕೆಲಸ ಮಾಡಿದ್ದಾರೆ. ಬೇಕಾದರೆ ಸದನಕ್ಕೆ ಪೊಲೀಸರನ್ನೇ ತುಂಬಿಕೊಳ್ಳಲಿ. ಪ್ರಜಾಪ್ರಭುತ್ವದಲ್ಲಿ ಸರಕಾರದ ತೀರ್ಮಾನಗಳ ಬಗ್ಗೆ ಧ್ವನಿ ಎತ್ತುವ ಅವಕಾಶವಿದೆ. ಕಲಾಪ ಜನರ ಧ್ವನಿಯನ್ನು ಪ್ರತಿನಿಧಿಗಳು ವ್ಯಕ್ತಪಡಿಸಲಿರುವ ಸ್ಥಳ. ಹೀಗಾಗಿ ವಿಧಾನಸಭೆಯಲ್ಲಿಯೇ ಪ್ರಸ್ತಾಪ ಮಾಡಬೇಕು. ಈ ಹಿಂದೆ ಪ್ರತಿಪಕ್ಷದಲ್ಲಿದ್ದಾಗ ಬಿಜೆಪಿಯ ನಾಯಕರು ಏನು ಮಾಡಿದ್ದಾರೆ? ರಾಜ್ಯಪಾಲರ ಭಾಷಣದ ವೇಳೆ ಏನು ಮಾಡಿದ್ದರು? ಯಾವ ರೀತಿ ಅಡೆತಡೆ ಮಾಡಿದ್ದರು. ರಾಷ್ಟ್ರಪತಿಗಳು ಬಂದಿದ್ದಾಗಲೂ ಇವರು ಏನು ಮಾಡಿದ್ದರೆಂಬುದು ಎಲ್ಲರಿಗೂ ತಿಳಿದಿದೆ. ಪ್ರಜಾಪ್ರಭುತ್ವದ ಹಕ್ಕು ಮೊಟಕುಗೊಳಿಸಲು ಸಾಧ್ಯವಿಲ್ಲ. ಬಿಜೆಪಿಗರಿಂದ ಪಾಠ ಹೇಳಿಸಿಕೊಳ್ಳಲು ನಾವು ಮಕ್ಕಳಲ್ಲ ಎಂದು ಟೀಕಿಸಿದರು.

### ಸ್ವಾತಂತ್ರ್ಯ ಕಸಿದುಕೊಳ್ಳಲು ಸಾಧ್ಯವಿಲ್ಲ

ವಿಧಾನಸಭಾ ಸ್ಪೀಕರ್ ವಿಶ್ವೇಶ್ವರ ಹೆಗಡೆ ಕಾಗೇರಿ ಮತ್ತು ವಿಧಾನ ಪರಿಷತ್ ಅಧ್ಯಕ್ಷ ಪ್ರತಾಪ್ ಚಂದ್ರ ಶೆಟ್ಟಿ ಅವರು ರಾಜ್ಯಪಾಲರ ಭಾಷಣಕ್ಕೆ ವಿರುದ್ಧವಾಗಿ



ಮಾತನಾಡುವುದನ್ನು ವಿರೋಧಿಸಲು ಆಜ್ಞೆಯನ್ನು ಹೊರಡಿಸುವ ಹಕ್ಕನ್ನು ಹೊಂದಿಲ್ಲ. ಅವರು ಸದಸ್ಯರ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಕಸಿದುಕೊಳ್ಳಲು ಸಾಧ್ಯವಿಲ್ಲ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು. ಕಳೆದ 6 ವರ್ಷಗಳಿಂದ ಕೇಂದ್ರದಲ್ಲಿ ಬಿಜೆಪಿ ಸರಕಾರ ನಡೆಸುತ್ತಿದೆ. ಅವರು ನೀಡಿದ ಎಲ್ಲ ಭರವಸೆಗಳನ್ನು ಈಡೇರಿಸಿದ್ದರೆ, ನಾವು ಆದರ್ಶ ಸಮಾಜವನ್ನು ನೋಡಬೇಕಿತ್ತು. ಆದರೆ ಬಿಜೆಪಿ ಒಂದು ಶತಕೋಟಿ ಜನರ ಕನಸುಗಳನ್ನು ಚೂರುಚೂರು ಮಾಡಿದೆ. ಅವರ ಸ್ವರ್ಗದ ಕನಸು ಈಗ ನರಕಕ್ಕೆ ತಿರುಗಿದೆ. ಯುವಕರು ನಿರುದ್ಯೋಗಿಗಳು, ಬೆಲೆಗಳು ಗಗನಕ್ಕೇರಿವೆ, ಜಿಡಿಪಿ ಬೆಳವಣಿಗೆ ಕುಸಿಯುತ್ತಿದೆ, ರಫ್ತು ಕುಸಿದಿದೆ ಎಂದು ಟೀಕಿಸಿದರು. ಸಂಘ ಪರಿವಾರದ ಗಾಂಧೀಜಿಯನ್ನು ಕೊಂದರು. ಈಗ ಅದೇ ಸಂಘ ಪರಿವಾರದಿಂದ, ಜಾಮಿಯಾ ಮಿಲಿಯಾ ವಿಶ್ವವಿದ್ಯಾಲಯದ ಪ್ರತಿಭಟನಕಾರರ ಮೇಲೆ ಗುಂಡು ಹಾರಿಸಿದ್ದು ಏಕೆ ಎಂದು ಪ್ರಶ್ನಿಸಿದ್ದಾರೆ.

**ದ್ವೇಷದ ರಾಜಕಾರಣ:** ಬಿಜೆಪಿ ಅಧಿಕಾರಕ್ಕೆ ಬಂದಾಗಿನಿಂದ ದ್ವೇಷದ ರಾಜಕಾರಣವನ್ನೇ ಮಾಡುತ್ತಿದೆ. ಮೈತ್ರಿ ಸರಕಾರದಲ್ಲಿ ಜಾರಿಯಾದ ಎಲ್ಲ ಕಾರ್ಯಕ್ರಮಗಳನ್ನು ರದ್ದು ಮಾಡಿದ್ದಾರೆ. ಹೊಸದಾಗಿ ಏನು ಬೇಕಾದರೂ ಮಂಜೂರು ಮಾಡಿಕೊಳ್ಳಲಿ. ಮಂಜೂರು ಆಗಿರುವುದನ್ನು ರದ್ದು ಮಾಡಿದ್ದು ಸರಿಯಲ್ಲ. ಈ ಬಗ್ಗೆ ನಮ್ಮ ಶಾಸಕರು ಸಭೆಯಲ್ಲಿ ಪ್ರಸ್ತಾಪಿಸಲೇಬೇಕು. ಮುಖ್ಯಮಂತ್ರಿ ಯಡಿಯೂರಪ್ಪ ಅವರಂತೆ ಸ್ಪೀಕರ್ ಸಹ ಏಕೆ ದ್ವೇಷದ ರಾಜಕಾರಣ ಮಾಡುತ್ತಿದ್ದಾರೆ? ಸರಕಾರದ ವಿರುದ್ಧ ತಮ್ಮ ಹೋರಾಟ ನಿರಂತರ ಎಂದು ಎಚ್ಚರಿಸಿದರು.